# DECEMBER 13, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ಕನ್ನಡ ಭಾ ಾ ನಾಮಫಲಕ** ಕಡ್ಡಾಯ ಅಳವಡಿಕೆ: ನಿಗಾವಹಿಸಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ.

- **ರಾಜ್ಯದ 7 ಮಹಾನಗರ** ಪಾಲಿಕೆಗಳಿಗೆ ತಲಾ 200 ಕೋಟಿಯಂತೆ ವಿಶೇಷ ಅನುದಾನ–ನಗರಾಭಿವೃದ್ಧಿ ಸಚಿವರಿಂದ ಮಾಹಿತಿ.

- **ಸರ್ಕಾರಿ ಭೂಮಿ ಅಕ್ರಮ** ಕಬಳಿಕೆ ಮಾಡುವವರ ವಿರುದ್ಧ ಕಠಿಣ ಕ್ರಮ– ಕಂದಾಯ ಸಚಿವರ ಎಚ್ಚರಿಕೆ.

- **ಹುಬ್ಬಳ್ಳಿ–ಧಾರವಾಡ** ಅವಳಿನಗರಗಳಿಗೆ ಪ್ರತ್ಯೇಕ ಪಾಲಿಕೆ: ರಾಜ್ಯಪಾಲರ ಅನುಮೋದನೆ ದೊರೆತ ಕೂಡಲೇ ಕ್ರಮ.

**ಈಗ ವಾರ್ತೆಗಳ ವಿವರ**

*******

**ರಾಜ್ಯದಲ್ಲಿ ಕನ್ನಡ ಭಾ ಾ** ನಾಮಫಲಕ ಕಡ್ಡಾಯ ಅಳವಡಿಕೆ ಕುರಿತು ನಿಗಾವಹಿಸಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ವಿಧಾನಪರಿ ‘ತ್ತಿನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಕಾಯ್ದೆಯ ಅನು ್ಠಾನದ ಜವಾಬ್ದಾರಿ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳದ್ದಾಗಿರುತ್ತದೆ. ಇದು ನಿರಂತರ ಪ್ರಕ್ರಿಯೆಯಾಗಿರುವ ಕಾರಣ ಅಪೂರ್ಣಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. ಈ ಅಧಿನಿಯಮದಂತೆ ಕ್ರಮವಹಿಸಲು ಅನು ್ಠಾನ ಅಧಿಕಾರಿಗಳಾದ ಎಲ್ಲಾ ಜಿಲ್ಲಾಧಿಕಾರಿಗಳಿಗೆ

ಸೂಚನೆ ನೀಡಲಾಗಿದೆ ಎಂದರು. ಕನ್ನಡದಲ್ಲಿ ನಾಮಫಲಕ ಅಳವಡಿಸಿಕೊಳ್ಳದ ಸಂಘ–ಸಂಸ್ಥೆಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

*******

**ಬೆಳಗಾವಿ, ವಿಜಯಪುರ,** ಧಾರವಾಡ ಒಳಗೊಂಡಂತೆ ಉತ್ತರ ಕರ್ನಾಟಕದಲ್ಲಿ ಡಿಫೆನ್ಸ್ ಕಾರಿಡಾರ್ ನಿರ್ಮಾಣಕ್ಕೆ ಸರ್ಕಾರ ಪ್ರಯತ್ನ ನಡೆಸಿದೆ ಎಂದು ಕೈಗಾರಿಕೆ ಸಚಿವ ಎಂ.ಬಿ. ಪಾಟೀಲ್ ಹೇಳಿದ್ದಾರೆ. ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಹುಬ್ಬಳ್ಳಿ–ಧಾರವಾಡ ಪಶ್ಚಿಮ ಕ್ಷೇತ್ರದ ಶಾಸಕ ಅರವಿಂದ ಬೆಲ್ಲದ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ದೇಶದ ಏರೋಸ್ಪೇಸ್ ಹಾಗೂ ಡಿಫೆನ್ಸ್ ಕ್ಷೇತ್ರಕ್ಕೆ ರಾಜ್ಯದ ಕೊಡುಗೆ ಶೇಕಡಾ 65 ರಷ್ಟು. ಡಿಫೆನ್ಸ್ ಕಾರಿಡಾರ್ ನಿರ್ಮಾಣ ಕುರಿತು ಕೇಂದ್ರ ರಕ್ಷಣಾ ಸಚಿವರಿಗೆ ಬೇಡಿಕೆ ಸಲ್ಲಿಸಲಾಗಿದೆ. ಇದಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಸಚಿವರು ಹೇಳಿದರು.

*******

**ರಾಜ್ಯದ 7 ಮಹಾನಗರ** ಪಾಲಿಕೆಗಳಿಗೆ ತಲಾ 200 ಕೋಟಿಯಂತೆ 1,400 ಕೋಟಿ ವಿಶೇಷ ಅನುದಾನ ನೀಡಲಾಗಿದೆ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್ ಹೇಳಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆಗಳನ್ನಾಗಿ ಉನ್ನತೀಕರಿಸುವ ವೇಳೆ ಹತ್ತಿರ ಇರುವ ಗ್ರಾಮಾಂತರ ಪ್ರದೇಶಗಳನ್ನು ಸಹ ಸೇರ್ಪಡೆ ಮಾಡಿ ಸರಹದ್ದು ನಿಗದಿಪಡಿಸಲಾಗುತ್ತಿದೆ. ಆದರೆ ಕೆಲ ಶಾಸಕರು ನಗರಸಭೆ ವ್ಯಾಪ್ತಿಯಿಂದ ಗ್ರಾಮಗಳನ್ನು ಕೈಬಿಡುವಂತೆ ಮನವಿ ಮಾಡುತ್ತಾರೆ. ಇದು ಕಷ್ಟದ ಕೆಲಸ. ನಗರಸಭೆ ವ್ಯಾಪ್ತಿಗೆ ಸೇರ್ಪಡೆ ಮಾಡಿದ ಗ್ರಾಮಗಳ ಅಭಿವೃದ್ಧಿಗೆ ಸರ್ಕಾರ ಹಣ ನೀಡಲಿದೆ, ಶಾಸಕರು ತಾಳ್ಮೆ ವಹಿಸಬೇಕು ಎಂದು ಸಚಿವ ಬಿ.ಎಸ್.ಸುರೇಶ್ ಮನವಿ ಮಾಡಿದರು.

*******

**ರಾಜ್ಯದ ಗ್ರಾಮ ಪಂಚಾಯಿತಿ** ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ಮೇಲ್ವಿಚಾರಕರಿಗೆ ನಿಗದಿತ ಸಮಯಕ್ಕೆ ವೇತನ ಪಾವತಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ವಿಧಾನಪರಿ ‘ತ್ತಿನಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಈ ಕುರಿತು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಕಳೆದ ನವೆಂಬರ್ ತಿಂಗಳಲ್ಲಿ ನಿರ್ದೇಶನ ನೀಡಲಾಗಿದೆ. ಕೆಲವು ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿ ತೆರಿಗೆ ಬೇಡಿಕೆ ಕಡಿಮೆ ಇರುವುದರಿಂದ ಗ್ರಂಥಾಲಯ ಮೇಲ್ವಿಚಾರಕರಿಗೆ ವೇತನ

ವ್ಯತ್ಯಾಸದ ಮೊತ್ತ ಪಾವತಿಸಲು ಕೊರತೆ ಇರುವುದರಿಂದ ಅಂತಹ ಜಿಲ್ಲೆಗಳಲ್ಲಿ ಬಾಕಿ ವೇತನವನ್ನು ಪಾವತಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿದೆ ಎಂದರು. ವೇತನ ಪಾವತಿಗೆ ಸಂಬಂಧಿಸಿದಂತೆ 2025–26 ನೇ ಸಾಲಿನಲ್ಲಿ ಮಾರ್ಚ್ 2025 ರಿಂದ ನವೆಂಬರ್ 2025 ರವರೆಗೆ 3 ತ್ರೈಮಾಸಿಕ ಕಂತುಗಳಲ್ಲಿ ಒಟ್ಟು 60,49,75,549 ಗೌರವ ಧನವನ್ನು ನೇರವಾಗಿ ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾಗಿದೆ ಎಂದು ಸಚಿವರು ಹೇಳಿದರು.

*******

**ಚಿಕ್ಕಮಗಳೂರು ಜಿಲ್ಲೆಯಲ್ಲಿ** ಪಿ.ಪಿ.ಪಿ ಮಾದರಿಯಲ್ಲಿ ಸ್ಪೈಸ್ ಪಾರ್ಕ್ ಅಭಿವೃದ್ಧಿಪಡಿಸಲು ಬೆಂಗಳೂರಿನ ಐಡೆಕ್ ಸಂಸ್ಥೆಯನ್ನು ವ್ಯವಹರಣಾ ಸಮಾಲೋಚಕರನ್ನಾಗಿ ನೇಮಿಸಲಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಈ ಹಿಂದೆ ಸ್ಪೈಸ್ ಪಾರ್ಕ್ ಅಭಿವೃದ್ಧಿಗೆ ಗುರುತಿಸಲಾಗಿದ್ದ ಜಾಗದ ಭೌತಿಕ ಪರಿಶೀಲನೆ ಕೈಗೊಂಡಾಗ, ಸದರಿ ಜಾಗವು ಸ್ಪೈಸ್ ಪಾರ್ಕ್ ನಿರ್ಮಾಣ ಮಾಡಲು ಸೂಕ್ತವಾಗದೇ ಇರುವ ಹಿನ್ನೆಲೆ, ಸೂಕ್ತವಾದ ಪರ್ಯಾಯ ಜಾಗ ನೀಡಲು ಕೋರಲಾಗಿತ್ತು. ಅದರಂತೆ ಚಿಕ್ಕಮಗಳೂರು ಜಿಲ್ಲೆಯ ಬೆಟ್ಟದಮನೆ ಗ್ರಾಮದಲ್ಲಿ ಸ್ಪೈಸ್ ಪಾರ್ಕ್ ಅಭಿವೃದ್ಧಿ ಉದ್ದೇಶಕ್ಕಾಗಿ ತೋಟಗಾರಿಕೆ ಇಲಾಖೆಗೆ ಭೂಮಿ ವರ್ಗಾಯಿಸಿ, ಆದೇಶ ಹೊರಡಿಸಲಾಗಿದೆ. ಜಮೀನಿನ ಹದ್ದುಬಸ್ತು ಗುರುತಿಸುವಿಕೆ ಪ್ರಕ್ರಿಯೆ ಪೂರ್ಣಗೊಂಡಿದೆ. ಪ್ರಸ್ತುತ ವ್ಯವಹರಣಾ ಸಮಾಲೋಚಕರನ್ನು ನೇಮಿಸಿ ವರದಿ ಸಿದ್ದಪಡಿಸಲು ಸೂಚಿಸಲಾಗಿದ್ದು, ವರದಿ ಬಂದ ಕೂಡಲೇ ಆದಷ್ಟು ಶೀಘ್ರ ಸ್ಪೈಸ್ ಪಾರ್ಕ್ ಕಾರ್ಯಾರಂಭಗೊಳಿಸಲಾಗುವುದು ಎಂದು ತಿಳಿಸಿದರು.

*******

**ಸರ್ಕಾರಿ ಭೂಮಿ ಅಕ್ರಮವಾಗಿ** ಕಬಳಿಕೆ ಮಾಡುವುದನ್ನು ಯಾವುದೇ ಕಾರಣಕ್ಕೂ ಸಹಿಸಲು ಸಾಧ್ಯವಿಲ್ಲ. ಅಂಥವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ. ವಿಧಾನಸಭೆಯಲ್ಲಿ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಇಂತಹ ಅಕ್ರಮಗಳಲ್ಲಿ ಕೆಲವೆಡೆ ಅಧಿಕಾರಿಗಳು ಶಾಮೀಲಾಗಿದ್ದಾರೆ. ಅಂಥವರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳಲಾಗುವುದು ಎಂದರು. ರೈತರ ಹೆಸರಿನಲ್ಲಿ ನಕಲಿ ಭೂಸಾಗುವಳಿ ಚೀಟಿ ಪಡೆದವರ ವಿರುದ್ಧದ ಪ್ರಕರಣಗಳ ತನಿಖೆ ಪ್ರಗತಿಯಲ್ಲಿದೆ. 2018 ರಿಂದ ಈವರೆಗೆ ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಅಭಿಲೇಖಾಲಯದ ಉಸ್ತುವಾರಿ ವಹಿಸಿದ್ದ ಎಲ್ಲ ಅಧಿಕಾರಿಗಳ ವಿರುದ್ಧ ಎಫ್.ಐ.ಆರ್. ದಾಖಲು ಮಾಡಲಾಗಿದೆ ಎಂದು ಸಚಿವರು ಹೇಳಿದರು.

*******

68.61 ಕೋಟಿ ಅಂದಾಜು ಮೌಲ್ಯದ ಒಟ್ಟು 9 ಎಕರೆ 0.01 ಗುಂಟೆ ಸರ್ಕಾರಿ ಜಮೀನನ್ನು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ ಅವರ ನೇತೃತ್ವದಲ್ಲಿ ತೆರವುಗೊಳಿಸಿ ಸರ್ಕಾರದ ವಶಕ್ಕೆ ಪಡೆಯಲಾಯಿತು. ಬೆಂಗಳೂರು ನಗರ ಜಿಲ್ಲೆಯಾದ್ಯಂತ ವಿವಿಧ ತಾಲ್ಲೂಕುಗಳ ತಹಶೀಲ್ದಾರ್‌ರು ತಮ್ಮ ವ್ಯಾಪ್ತಿಯಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಗೊಕಟ್ಟೆ, ಸರ್ಕಾರಿ ಕುಂಟೆ, ಗೋಮಾಳ, ಖರಾಬು, ಖರಾಬು ಕೆರೆ ಜಾಗಗಳಿಗೆ ಭೇಟಿ ನೀಡಿ ತೆರವು ಕಾರ್ಯಾಚರಣೆ ಕೈಗೊಂಡರು.

*******

**ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..**
**ಪ್ರಕಟಣೆ–52 ಸೆಕೆಂಡ್ಸ್**
**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**
*******

**ಹುಬ್ಬಳ್ಳಿ–ಧಾರವಾಡ ಮಹಾನಗರ** ಪಾಲಿಕೆಯನ್ನು ವಿಭಜಿಸಿ ಅವಳಿ ನಗರಗಳಿಗೆ ಪ್ರತ್ಯೇಕ ಪಾಲಿಕೆ ರಚಿಸಲು ಸರ್ಕಾರ ನಿರ್ಧರಿಸಿದೆ. ವಿಧಾನಸಭೆಯಲ್ಲಿ ಸದಸ್ಯ ಅಬ್ಬಯ್ಯ ಪ್ರಸಾದ್ ಅವರ ಪ್ರಶ್ನೆಗೆ ಉತ್ತರಿಸಿ, ಈ ಮಾಹಿತಿ ನೀಡಿದ ಸಚಿವ ಬಿ.ಎಸ್.ಸುರೇಶ್, ಹುಬ್ಬಳ್ಳಿ ಮತ್ತು ಧಾರವಾಡ ಪ್ರತ್ಯೇಕ ಮಹಾನಗರ ಪಾಲಿಕೆ ರಚನೆ ಸಂಬಂಧ ಸಾರ್ವಜನಿಕರ ಆಕ್ಷೇಪಣೆ, ಸಲಹೆ ಸಹಿತ ಸಮಗ್ರ ವರದಿಯನ್ನು ರಾಜ್ಯಪಾಲರ ಅನುಮೋದನೆಗೆ ಕಳುಹಿಸಲಾಗಿದೆ. ರಾಜ್ಯಪಾಲರ ಅನುಮೋದನೆ ದೊರೆತ ಕೂಡಲೆ ಮಹಾನಗರ ಪಾಲಿಕೆ ರಚನೆ ಸಂಬಂಧ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪ ಟ್ಟಪಡಿಸಿದ್ದಾರೆ.

*******

**ಡಿಸೆಂಬರ 19 ರಿಂದ ಮೂರು** ದಿನಗಳ ಕಾಲ ಹಮ್ಮಿಕೊಂಡಿದ್ದ ರಾಷ್ಟ್ರೀಯ ಚಾಲುಕ್ಯ ಉತ್ಸವವನ್ನು ಮುಂದೂಡಲಾಗಿದೆ. ಬೆಳಗಾವಿಯ ಚಳಿಗಾಲದ ಅಧಿವೇಶನ ಡಿಸೆಂಬರ 19 ರವರೆಗೆ ನಡೆಯಲಿದ್ದು, ಅಲ್ಲದೇ ಜನವರಿ 3 ರಿಂದ, ಒಂದು ತಿಂಗಳ ಕಾಲ ಬಾದಾಮಿ ಬನಶಂಕರಿ ದೇವಿ ಜಾತ್ರೆ ಕೂಡಾ ನಡೆಯಲಿರುವ ಕಾರಣ ಉತ್ಸವ ಮುಂದೂಡಲಾಗಿದೆ. ಬರುವ 2026 ರ ಜನವರಿ 17, 18 ಹಾಗೂ 19 ರಂದು ಉತ್ಸವ ಆಚರಿಸಲು ನಿರ್ಧರಿಸಲಾಗಿದೆ. ಎಂದು ಮಾಹಿತಿ ನೀಡಿದ್ದಾರೆ ಜಿಲ್ಲಾಧಿಕಾರಿ ಸಂಗಪ್ಪ ಅವರು,

**ಧ್ವನಿ–ಸಂಗಪ್ಪ ಜಿಲ್ಲಾಧಿಕಾರಿ– ಸೆಕೆಂಡ್ಸ್**

*******

**ಹುಬ್ಬಳ್ಳಿಯ ನೈಋತ್ಯ ರೈಲ್ವೆ ಸೆಂಟ್ರಲ್** ಆಸ್ಪತ್ರೆಯಲ್ಲಿ ಅತ್ಯಾಧುನಿಕ 'ಮೊಬೈಲ್ ಡಿಜಿಟಲ್ ರೇಡಿಯೋಗ್ರಫಿ ಯಂತ್ರ'ವನ್ನು ನೈಋತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕ ಮುಕುಲ್ ಸರನ್ ಮಾಥುರ್ ಉದ್ಘಾಟಿಸಿದರು. ಈ ಸುಧಾರಿತ ವೈದ್ಯಕೀಯ ಉಪಕರಣಕ್ಕಾಗಿ 15,68,000 ರೂಪಾಯಿ ವೆಚ್ಚ ಮಾಡಲಾಗಿದೆ. ಈ ನೂತನ ಮೊಬೈಲ್ ಡಿಜಿಟಲ್ ರೇಡಿಯೋಗ್ರಫಿ ಯಂತ್ರವು ರೋಗಿಯ ಹಾಸಿಗೆಯ ಪಕ್ಕದಲ್ಲಿಯೇ ಹೈ–ಡೆಫಿನಿ ’ನ್ ಇಮೇಜಿಂಗ್ ಸೌಲಭ್ಯ ಒದಗಿಸುತ್ತದೆ. ಇದರಿಂದಾಗಿ ತೀವ್ರವಾಗಿ ಅಸ್ವಸ್ಥರಾದ ರೋಗಿಗಳನ್ನು ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಸ್ಥಳಾಂತರಿಸುವ ಅಗತ್ಯ ಕಡಿಮೆಯಾಗುತ್ತದೆ. ಇದು ವೇಗವಾದ, ಸುರಕ್ಷಿತ ಮತ್ತು ಹೆಚ್ಚು ಪರಿಣಾಮಕಾರಿ ರೋಗನಿರ್ಣಯವನ್ನು ಖಚಿತಪಡಿಸುತ್ತದೆ.

*******

**ವಿವಿಧ ಇಲಾಖೆಗಳ** ಸಹಯೋಗದಲ್ಲಿ ಇದೇ ಇಂದಿನಿಂದ 15 ರವರೆಗೆ 13 ಧಾರವಾಡ ಜಿಲ್ಲಾಮಟ್ಟದ ಫಲಪು ್ಪ, ವಸ್ತು ಪ್ರದರ್ಶನ ಹಾಗೂ ವಾಣಿಜ್ಯ ಮೇಳ ಮತ್ತು ಮಾರಾಟ ಮೇಳ ಆಯೋಜಿಸಲಾಗಿದೆ.

*******

## ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

**ಕನ್ನಡ ಭಾ ಾ ನಾಮಫಲಕ** ಕಡ್ಡಾಯ ಅಳವಡಿಕೆ: ನಿಗಾವಹಿಸಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ.

**ರಾಜ್ಯದ 7 ಮಹಾನಗರ** ಪಾಲಿಕೆಗಳಿಗೆ ತಲಾ 200 ಕೋಟಿಯಂತೆ ವಿಶೇಷ ಅನುದಾನ–ನಗರಾಭಿವೃದ್ಧಿ ಸಚಿವರಿಂದ ಮಾಹಿತಿ.

**ಸರ್ಕಾರಿ ಭೂಮಿ ಅಕ್ರಮ** ಕಬಳಿಕೆ ಮಾಡುವವರ ವಿರುದ್ಧ ಕಠಿಣ ಕ್ರಮ– ಕಂದಾಯ ಸಚಿವರ ಎಚ್ಚರಿಕೆ.

**ಹುಬ್ಬಳ್ಳಿ–ಧಾರವಾಡ** ಅವಳಿನಗರಗಳಿಗೆ ಪ್ರತ್ಯೇಕ ಪಾಲಿಕೆ: ರಾಜ್ಯಪಾಲರ ಅನುಮೋದನೆ ದೊರೆತ ಕೂಡಲೇ ಕ್ರಮ.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******